# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ಗೀತಮ್ಮ, ಗ್ರಾಮ ಪಂಚಾಯಿತಿ ಸದಸ್ಯರು, ನೆಲ್ಲಿಹಂಕಲು ಗ್ರಾಮ ಪಂಚಾಯಿತಿ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ. ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ದಾ:/ಪಾಶಾ/ಸಿಆರ್/43/2017-18 ದಿನಾಂಕ:19.06.2018.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/10/2019-20, ದಿನಾಂಕ:05.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ಜಿಲ್ಲೆ ಇವರು ಚನ್ನಗಿರಿ ತಾಲ್ಲೂಕು, ನೆಲ್ಲಿಹಂಕಲು ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀಮತಿ ಜಿ.ಕೆ. ಗೀತಮ್ಮ ಇವರು ಸತತವಾಗಿ ದಿನಾಂಕ:01.06.2017, 28.06.2017, 21.07.2017, 12.09.2017 ಹಾಗೂ 13.10.2017ರಂದು 5 ಗ್ರಾಮ ಪಂಚಾಯಿತ ಸಾಮಾನ್ಯ ಸಭೆಗಳಗೆ ಗೈರು ಹಾಜರಾಗಿದ್ದು ಈ ಬಗ್ಗೆ ದಿನಾಂಕ.13.10.2017ರ ಗ್ರಾಮ ಪಂಚಾಯತಿ ಸಭೆಯಲ್ಲಿ ಇವರ ವಿರುದ್ಧ ಕ್ರಮ ಕೈಗೊಳ್ಳುವಂತೆ ನಿರ್ಣಯ ಕೈಗೊಂಡಿರುವ ಸಭಾ ನಡವಳಿಯೊಂದಿಗೆ ಸಲ್ಲಿಸುತ್ತಾ, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ)ರಂತೆ ಕ್ರಮವಹಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3)ರ ಪ್ರಸ್ತಾವನೆಯಲ್ಲಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ರವರು ಶ್ರೀಮತಿ ಗೀತಮ್ಮ, ಗ್ರಾಮ ಪಂಚಾಯಿತಿ ಸದಸ್ಯರು, ನೆಲ್ಲಿಹಂಕಲು ಗ್ರಾಮ ಪಂಚಾಯಿತಿ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಸತತವಾಗಿ 5 ಬಾರಿ ಪಂಚಾಯತಿ ಸಭೆಗೆ ಗೈರು ಹಾಜರಾದ ಹಿನ್ನೆಲೆಯಲ್ಲಿ ಇವರ ವಿರುದ್ಧ ಇರುವ ದೂರಿನ ಬಗ್ಗೆ ನೋಟೀಸ್ ನೀಡಿ ದಿನಾಂಕ.24.06.2019 ಹಾಗೂ ದಿನಾಂಕ.13.09.2019ರಂದು ವಿಚಾರಣೆ ನಡೆಸಲಾಗಿರುತ್ತದೆ. ಸದರಿಯವರು ವಿಚಾರಣೆಗೆ ಹಾಜರಾಗಿರುವುದಿಲ್ಲ ಹಾಗೂ ಲಿಖಿತ ಹೇಳಿಕೆಯನ್ನೂ ಸಹ ನೀಡಿರುವುದಿಲ್ಲ.

| ಕ್ರ.ಸಂ. | ಹೆಸರು | 01/06/2017 | 28/06/2017 | 21/07/2017 | 12/09/2017 | 13/10/2017 |
|---|---|---|---|---|---|---|
| 1 | ಶ್ರೀಮತಿ ಜಿ.ಕೆ. ಗೀತಮ್ಮ | ಗೈರು | ಗೈರು | ಗೈರು | ಗೈರು | ಗೈರು |

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮಾಡಿರುವ ವರದಿಯಿಂದ ಸದರಿರವರು ಸತತವಾಗಿ 5 ಬಾರಿ ಪಂಚಾಯತಿ ಸಭೆಗೆ ಗೈರು ಹಾಜರಾಗಿರುವುದು ರುಜುವಾತಾಗಿರುತ್ತದೆ. ಆದ ಕಾರಣ ಶ್ರೀಮತಿ ಜಿ.ಕೆ. ಗೀತಮ್ಮ, ಸದಸ್ಯರು, ನೆಲ್ಲಿಹಂಕಲು ಗ್ರಾಮ ಪಂಚಾಯಿತಿರವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(ಎ) (iii) ರನ್ವಯ ಕ್ರಮ ಕೈಗೊಳ್ಳಬಹುದಾಗಿರುತ್ತದೆಂದು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.

ಈ ಪ್ರಕರಣದ ವಿಚಾರಣಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ಗೀತಮ್ಮ, ಗ್ರಾಮ ಪಂಚಾಯಿತಿ ಸದಸ್ಯರು, ನೆಲ್ಲಿಹಂಕಲು ಗ್ರಾಮ ಪಂಚಾಯಿತಿ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಸತತವಾಗಿ 5 ಬಾರಿ ಪಂಚಾಯತಿ ಸಭೆಗೆ ಗೈರು ಹಾಜರಾಗಿರುವ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಸದಸ್ಯತ್ವದಿಂದ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1094 ಗ್ರಾಪಂಅ 2019 ಬೆಂಗಳೂರು, ದಿನಾಂಕ:17.01.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಗೀತಮ್ಮ, ಗ್ರಾಮ ಪಂಚಾಯಿತಿ ಸದಸ್ಯರು, ನೆಲ್ಲಿಹಂಕಲು ಗ್ರಾಮ ಪಂಚಾಯಿತಿ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ದಿನಾಂಕ:01.06.2017, 28.06.2017, 21.07.2017, 12.09.2017 ಹಾಗೂ 13.10.2017ರಂದು ಒಟ್ಟು 5 ಬಾರಿ ಸತತವಾಗಿ ಗ್ರಾಮ ಪಂಚಾಯತಿ ಸಭೆಗಳಿಗೆ ಗೈರು ಹಾಜರಾಗಿರುವ ಆಪಾದನೆ ಸಾಬೀತಾಗಿರುತ್ತದೆ. ಆದುದರಿಂದ ಶ್ರೀಮತಿ ಗೀತಮ್ಮ, ಗ್ರಾಮ ಪಂಚಾಯಿತಿ ಸದಸ್ಯರು, ನೆಲ್ಲಿಹಂಕಲು ಗ್ರಾಮ ಪಂಚಾಯಿತಿ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 43(ಎ) ರನ್ವಯ ಬನ್ನಿಕೋಡು ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar
(ನವೀನ್ ಕುಮಾರ್.ಬಿ) 17/01/2020

ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**<u>ಪ್ರತಿ:</u>**

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹೆಚ್. ರಸ್ತೆ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ ಜಿಲ್ಲೆ.
4. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
5 ಪಂಚಾಯತಿ ಅಭಿವೃದ್ಧಿ ಅಧಿಕಾರಿ, ನೆಲ್ಲಿಹಂಕಲು ಗ್ರಾಮ ಪಂಚಾಯತಿ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
6 ಶ್ರೀಮತಿ ಗೀತಮ್ಮ, ಗ್ರಾಮ ಪಂಚಾಯಿತಿ ಹಿಂದಿನ ಸದಸ್ಯರು, ನೆಲ್ಲಿಹಂಕಲು ಗ್ರಾಮ ಪಂಚಾಯಿತಿ, ಚನ್ನಗಿರಿ ತಾಲ್ಲೂಕು, ದಾವಣಗೆರೆ ಜಿಲ್ಲೆ (**ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚನ್ನಗಿರಿ, ದಾವಣಗೆರೆ ಜಿಲ್ಲೆ ಇವರ ಮುಖಾಂತರ**)

**<u>ಪ್ರತಿಯನ್ನು ಮಾಹಿತಿಗಾಗಿ:</u>**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.

8 4